ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	235
ಸದಸ್ಯರ ಹೆಸರು	:	ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಯಿಂದ ಆಯ್ಕೆಯಾದವರು)
ಉತ್ತರಿಸುವ ದಿನಾಂಕ	:	17.02.2022
ಉತ್ತರಿಸುವ ಸಚಿವರು	:	ಮಾನ್ಯ ಜಲಸಂಪನ್ಮೂಲ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ಕಲಬುರಗಿ ಜಿಲ್ಲೆಯ ಗಂಡೋರಿನಾಲಾ ಮತ್ತು ಮುಲ್ಲಾಮಾರಿ ಮೇಲ್ದಂಡೆ ಯೋಜನೆಗಳ ಆಧುನೀಕರಣ ಕಾಮಗಾರಿಗಾಗಿ ರೂ.160.60 ಕೋಟಿಗಳ ಅನುದಾನವನ್ನು ಒದಗಿಸಲಾಗಿದ್ದು, ಈ ಅನುದಾನದಲ್ಲಿ ಕೈಗೊಂಡ ಆಧುನೀಕರಣ ಕಾಮಗಾರಿಗಳು ಯಾವುವು; (ವಿವರ ನೀಡುವುದು)	ಕಲಬುರಗಿ ಜಿಲ್ಲೆಯ ಗಂಡೋರಿನಾಲಾ ಯೋಜನೆ ಕಾಲುವೆಗಳು ಮತ್ತು ಮೇಲ್ದಂಡೆ ಮುಲ್ಲಾಮಾರಿ ಯೋಜನೆಯ ಕಾಲುವೆಗಳ ಆಧುನೀಕರಣ ಕಾಮಗಾರಿಯನ್ನು ಟೆಂಡರ್ ಆಧಾರದ ಮೇಲೆ ಶ್ರೀ ನಾಗಪ್ಪಾ ವಡ್ಡರ ಸಾ॥ ಲಿಂಗಸೂರ ಇವರಿಗೆ ದಿನಾಂಕ:26.03.2018 ರಂತೆ ಗುತ್ತಿಗೆ ಮೊತ್ತ ರೂ.176.39 ಕೋಟಿಗಳಿಗೆ ವಹಿಸಿಕೊಡಲಾಗಿದೆ. ಸದರಿ ಯೋಜನೆಯಲ್ಲಿ ಈ ಕೆಳಕಂಡ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. 1) ಗಂಡೋರಿನಾಲಾ ಯೋಜನೆಯ ಬಲದಂಡೆ ಕಾಲುವೆ ಕಿ.ಮೀ.0.00 ರಿಂದ 7.00 ಹಾಗೂ ಇದರಡಿ ಬರುವ 03 ವಿತರಣಾ ಕಾಲುವೆಗಳು, ಎಡದಂಡೆ ಕಾಲುವೆ ಕಿ.ಮೀ.0.00 ರಿಂದ 60.00 ಹಾಗೂ ಇದರಡಿ ಬರುವ 11 ವಿತರಣಾ ಕಾಲುವೆಗಳ ಆಧುನೀಕರಣ ಕಾಮಗಾರಿ. 2) ಮೇಲ್ದಂಡೆ ಮುಲ್ಲಾಮಾರಿ ಯೋಜನೆಯ ಬಲದಂಡೆ ಕಾಲುವೆ ಕಿ.ಮೀ.0.00 ರಿಂದ 42.00 ಹಾಗೂ ಇದರಡಿ ಬರುವ 45 ವಿತರಣಾ ಕಾಲುವೆಗಳು, ಎಡದಂಡೆ ಕಾಲುವೆ ಕಿ.ಮೀ.0.00 ರಿಂದ 28.00 ಹಾಗೂ ಇದರಡಿ ಬರುವ 27 ವಿತರಣಾ ಕಾಲುವೆಗಳ ಆಧುನೀಕರಣ ಕಾಮಗಾರಿ.
ಆ)	ಸದರಿ ಜಿಲ್ಲೆಯಲ್ಲಿ ಗಂಡೋರಿನಾಲಾ ಮತ್ತು ಮುಲ್ಲಾಮಾರಿ ಮೇಲ್ದಂಡೆ ಯೋಜನೆಯ ಕಾಲುವೆಗಳ ಆಧುನೀಕರಣ ಕಾಮಗಾರಿಯನ್ನು ಪೂರ್ಣಗೊಳಿಸಲಾಗಿದೆಯೇ. ಇಲ್ಲದಿದ್ದಲ್ಲಿ ಯಾವಾಗ ಪೂರ್ಣಗೊಳಿಸಲಾಗುವುದು; (ವಿವರ ನೀಡುವುದು)	ಸದರಿ ಯೋಜನೆಗಳ ಕಾಮಗಾರಿಗಳು ಪೂರ್ಣಗೊಳ್ಳುವ ಹಂತದಲ್ಲಿದ್ದು, ಸದರಿ ಕಾಮಗಾರಿಗಳ ಸಂಬಂಧ ಇಲ್ಲಿಯವರೆಗೆ ರೂ.164.69 ಕೋಟಿಗಳ ಆರ್ಥಿಕ ಪ್ರಗತಿ ಸಾಧಿಸಲಾಗಿದ್ದು, ಕಾಮಗಾರಿಗಳನ್ನು ಪ್ರಸಕ್ತ ಸಾಲಿನಲ್ಲಿ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ.
ಇ)	ಪೂರ್ಣಗೊಳಿಸಿದ್ದಲ್ಲಿ, ಪೂರ್ಣಗೊಳಿಸಿದ ದಿನಾಂಕ, ವರ್ಷ ಸಹಿತ ವಿವರ ನೀಡುವುದು?	

ಸಂಖ್ಯೆ: ಜಸಂಇ 17 ಎಂಎಲ್ಎ 2021

(ಗೋವಿಂದ ಎಂ. ಕಾರಜೋಳ)
ಜಲಸಂಪನ್ಮೂಲ ಸಚಿವರು